ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃರವರ ನ್ಯಾಯಾಲಯ,
ಕೊಪ್ಪ

**ಸಿ. ಸಿ. ನಂ.298/2019**

**ಪಿರ್ಯಾಧಿದಾರರು:** ರಾಜ್ಯದ ಪರವಾಗಿಃ ಕೊಪ್ಪ ಪೋಲೀಸರು

-ವಿರುದ್ಧ-

**ಆರೋಪಿ/ತರುಃ**
1. ಸುಕನ್ಯಾ ಕೋಂ ಯೋಗೀಶ್, 46 ವರ್ಷ, ಮನೆಗೆಲಸ, ವಾಸ ಹುಲುಮಕ್ಕಿ, ಸೋಮ್ಲಾಪುರ ರಸ್ತೆ, ಸೋಮ್ಲಾಪುರ ಗ್ರಾಮ, ಕೊಪ್ಪ ತಾಲ್ಲೂಕು.
2. ಚಂದ್ರಶೇಖರ ಬಿನ್ ಸೂರಪ್ಪಗೌಡ, 55 ವರ್ಷ, ವಿಜಯ ವೈನ್ಸ್ ಮಾಲೀಕರು, ವಾಸ ಕಾಗಲಗೋಡು, ನರಸೀಪುರ ಗ್ರಾಮ, ಕೊಪ್ಪ ತಾಲ್ಲೂಕು.

**ದೋಷಾರೋಪಣೆ**

ಶ್ರೀಮತಿ ನಂದಿನಿ ಎಂ.ಎನ್., ಬಿ.ಎ., ಎಲ್.ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಃ ಕೊಪ್ಪ ಆದ ನಾನು ಮೇಲ್ಕಂಡ ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 30.01.2019 ರಂದು ಸಂಜೆ 7.10 ಗಂಟೆ ಸಮಯದಲ್ಲಿ ಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯ ಸೋಮ್ಲಾಪುರ ಗ್ರಾಮದ ಹುಲುಮಕ್ಕಿಯಲ್ಲಿ 1 ನೇ ಆರೋಪಿಯಾದ ನೀವು ನಿಮ್ಮ ಮನೆಯ ಮುಂದಿನ ಅಂಗಳದಲ್ಲಿ ಯಾವುದೇ ಪರವಾನಿಗೆ ಇಲ್ಲದೇ ಅಕ್ರಮವಾಗಿ 90 ಎಂ.ಎಲ್. ನ ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ 40 ಪೌಚುಗಳ ಮದ್ಯವನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ಸ್ವಾಧೀನ ಹೊಂದಿದ್ದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 32 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ ಎಂದೂ,

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿಯಾದ ನೀವು ಮೇಲ್ಕಂಡ ಮದ್ಯವನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ದಾಸ್ತಾನು ಹೊಂದಿದ್ದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 34 ರ ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

2 ನೇ ಆರೋಪಿಯಾದ ನೀವು ಪರವಾನಿಗೆಯ ನಿಯಮಗಳನ್ನು ಉಲ್ಲಂಘನೆ ಮಾಡಿ 1 ನೇ ಆರೋಪಿಗೆ ಮದ್ಯವನ್ನು ಮಾರಾಟ ಮಾಡಲು ಮೇಲ್ಕಂಡಂತೆ ಮದ್ಯದ ಪೌಚುಗಳನ್ನು ನೀಡಿ ಕರ್ನಾಟಕ ಅಬಕಾರಿ ಕಾಯಿದೆ ಕಲಂ 36 ರ ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಮೇಲಿನ ದೋಷಾರೋಪಣೆ ಬಗ್ಗೆ ಅಧಿವಿಚಾರಣೆ ಈ ನ್ಯಾಯಾಲಯದಿಂದ ನಡೆಸಲ್ಪಡುತ್ತದೆ ಎಂದು ಈ ಮೂಲಕ ನಿರ್ದೇಶಿಸಲಾಗಿದೆ.

ದಿನಾಂಕ ಃ09.06.2026.

ಸಹಿ/- 09.06.2026.
(ಶ್ರೀಮತಿ ನಂದಿನಿ ಎಂ.ಎನ್.)
ಸಿವಿಲ್ ನ್ಯಾಯಾಧೀಶರು ಮತ್ತು
*ಪ್ರದನ್ಯಾದಂಃ ಕೊಪ್ಪ*

**1ನೇ ಆರೋಪಿಯ ಆರೋಗ್ಯ ಸರಿ ಇಲ್ಲದೇ ಇದ್ದ ಕಾರಣ ನ್ಯಾಯಾಲಯಕ್ಕೆ ಹಾಜರಾಗಲು ಸಾಧ್ಯವಾಗದೇ ಇದ್ದ ಕಾರಣ ವಿಡಿಯೋ ಕಾನ್ಫರೆನ್ಸ್ ಮುಖಾಂತರ ಹಾಜರಾಗಿ ಪ್ರಶ್ನೆಗಳನ್ನು ಕೇಳಲಾಯಿತು.**

ಪ್ರ:1ಃ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉಃ ಆ-1 ತಿಳಿಯಿತು.0

ಪ್ರ:2ಃ ತಪ್ಪು ಒಪ್ಪಿಕೊಳ್ಳುತ್ತಿರೋ ಅಥವಾ ವಿಚಾರಣೆ ಆಗಬೇಕಾ?

ಉಃ ಆ-1 ವಿಚಾರಣೆಯಾಗಬೇಕು.

ಈ ಮೇಲ್ಕಂಡ ದೋಷಾರೋಪಣೆಯನ್ನು ನಾನೇ ಸ್ವತಃ ಆರೋಪಿಗೆ ವಿಡಿಯೋ ಕಾನ್ಫರೆನ್ಸ್ ಮುಖಾಂತರ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.

ಪ್ರ:1ಃ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉಃ ಆ-2 ತಿಳಿಯಿತು.

ಪ್ರ:2ಃ ತಪ್ಪು ಒಪ್ಪಿಕೊಳ್ಳುತ್ತಿರೋ ಅಥವಾ ವಿಚಾರಣೆ ಆಗಬೇಕಾ?

ಉಃ ಆ-2 ವಿಚಾರಣೆಯಾಗಬೇಕು.

ಈ ಮೇಲ್ಕಂಡ ದೋಷಾರೋಪಣೆಯನ್ನು ನಾನೇ ಸ್ವತಃ 2ನೇ ಆರೋಪಿಗೆ ಮುಖಾಂತರ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕ 09.06.2026

ಸಹಿ/- 09.06.2026.
(ಶ್ರೀಮತಿ ನಂದಿನಿ ಎಂ.ಎನ್.)
ಸಿವಿಲ್ ನ್ಯಾಯಾಧೀಶರು ಮತ್ತು
*ಪ್ರದನ್ಯಾದಂಃ ಕೊಪ್ಪ*